ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಉ ನಿ : ಸುಮಪ : 2018–19** **ದಿನಾಂಕ: 22–02–2019**

# ಪತ್ರಿಕಾ ಪ್ರಕಟಣೆ

## ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ

**ಬೆಂಗಳೂರು, ಫೆ 22 (ಕರ್ನಾಟಕ ವಾರ್ತೆ)**

2013–18 ರ ನೂತನ ಜವಳಿ ನೀತಿ ಯೋಜನೆಯಡಿ ಹೊಸದಾಗಿ ಜವಳಿ ಉದ್ದಿಮೆಗಳ ಘಟಕಗಳನ್ನು ಸಣ್ಣ ಮತ್ತು ಅತಿಸಣ್ಣ ಎಂಎಸ್‌ಎಂಇ ಘಟಕಗಳನ್ನು ಸ್ಥಾಪನೆಗೆ ಪ್ರೋತ್ಸಾಹಿಸಲು ಆಸಕ್ತಿಯುಳ್ಳ ಬಾವಿ ಜವಳಿ ಉದ್ದಿಮೆದಾರರಿಗೆ 02 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮವನ್ನು ಜಂಟಿ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ದಕ್ಷಿಣ ವಿಭಾಗ/ವಲಯ, ಬೆಂಗಳೂರು ವತಿಯಿಂದ ಹಮ್ಮಿಕೊಳ್ಳಲಾಗಿದೆ. ದಿನಾಂಕ 01–03–2019 ರಂದು ಹೋಟೆಲ್ ಮೌರ್ಯ, ರೇಸ್‌ಕೋರ್ಸ್ ರಸ್ತೆ, ಆನಂದರಾವ್ ಸರ್ಕಲ್ ಬೆಂಗಳೂರು ಇಲ್ಲಿ ಜವಳಿ ಉದ್ದಿಮೆಯಲ್ಲಿ ಅನುಭವ ಹೊಂದಿರುವ ಸಂಪನ್ಮೂಲ ವ್ಯಕ್ತಿಗಳಿಂದ ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ. ಈ ಕಾರ್ಯಾಗಾರದಲ್ಲಿ ಎಂಬ್ರೈಡರಿ, Surface Augmentation, Blog Printing, Weaving, Readymade Garments, Technical Textiles, Project Report Preparation, ಆರ್ಥಿಕ ವ್ಯವಹಾರ ಮತ್ತು ನಿರ್ವಹಣೆ ವಿಷಯಗಳ ಬಗ್ಗೆ ಮಾಹಿತಿಯನ್ನು ನೀಡಲಾಗುವುದು. ಇದರ ಜೊತೆಗೆ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುವ ರಾಜ್ಯ ಸರ್ಕಾರದ ಯೋಜನೆಗಳ ಮಾಹಿತಿ ಮತ್ತು ಲಭ್ಯವಿರುವ ಹಣಕಾಸಿನ ನೆರವಿನ ವಿವರಗಳ ಮಾಹಿತಿಯನ್ನು ನೀಡಲಾಗುವುದು. ದಿನಾಂಕ 02–03–2019 ರಂದು ಜವಳಿ ಘಟಕಗಳಿಗೆ ಭೇಟಿಯನ್ನು ಸಹ ಏರ್ಪಡಿಸಲಾಗಿರುತ್ತದೆ. ಇದರ ಸದುಪಯೋಗವನ್ನು ಆಸಕ್ತಿಯುಳ್ಳ ಬಾವಿ ಉದ್ದಿಮೆದಾರರು ಪಡೆದುಕೊಳ್ಳಲು ಅನುಕೂಲವನ್ನು ಕಲ್ಪಿಸಲಾಗಿದೆ. ಮೊದಲು ಬಂದ ಅರ್ಜಿಗಳಿಗೆ ಪ್ರಶಸ್ತ್ಯವನ್ನು ನೀಡಲಾಗುವುದು. ಸದರಿ ಕಾರ್ಯಾಗಾರಕ್ಕೆ ನೋಂದಣಿ ಮಾಡಿಕೊಳ್ಳಲು ದಿನಾಂಕ 28–02–2019 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಜಂಟಿ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ದಕ್ಷಿಣ ವಲಯ, (ಬೆಂಗಳೂರು) ನಂ. 39/2, 4 ನೇ ಮಹಡಿ, ಎಎಸ್‌ವಿಎನ್‌ವಿ ಭವನ, ಕೆಂಪೇಗೌಡ ರಸ್ತೆ, ಬೆಂಗಳೂರು –

560009 ದೂರವಾಣಿ 080—22382666 ಇ–ಮೇಲ್ jdsouthdvn@gmail.com ನಲ್ಲಿ ಸಂಪರ್ಕಿಸಬಹುದಾಗಿದೆ.